ಶ್ರೀರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

181 ಶ್ರೀ ಬಾಲಕೃಷ್ಣ ಹೆಚ್.ಸಿ. : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲಾ ಕೇಂದ್ರದಲ್ಲಿ ರಾಜೀವ್ ಗಾಂಧಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಯಾವಾಗ ತೀರ್ಮಾನಿಸಲಾಯಿತು; ಇದರ ಸ್ವರೂಪ ಹಾಗೂ ರೂಪುರೇಷೆಗಳೇನು;

ಆ) ವಿಶ್ವವಿದ್ಯಾಲಯ ಪ್ರಾರಂಭಿಸಲು ವಿಳಂಬವಾಗುತ್ತಿರುವ ಬಗ್ಗೆ ಈ ಹಿಂದೆ ಸದನಗಳಲ್ಲಿ ಶೀಘ್ರವೇ ಪ್ರಾರಂಭಿಸಲಾಗುವುದೆಂಬ ಉತ್ತರ ನೀಡಲಾಗಿತ್ತೆ ಇದನ್ನು ಇನ್ನೂ ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು; ಮಾಹಿತಿ ನೀಡುವುದು;

ಇ) ಸರಕಾರ ಎಂದಿನಿಂದ ಆರೋಗ್ಯ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಚಾಲನೆ ನೀಡಲಾಗುವುದು?

ಶ್ರೀರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ದಿನಾಂಕ: 20–03–2007 ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕ್ಯಾಂಪಸ್ ವೈದ್ಯಕೀಯ ಮಹಾವಿದ್ಯಾಲಯ ಮತ್ತು 500 ಹಾಸಿಗೆಗಳ ಸಾಮರ್ಥ್ಯದ ಬೋಧಕ ಆಸ್ಪತ್ರೆ, ದಂತ ಮಹಾವಿದ್ಯಾಲಯ, ಶುಶ್ರೂಷಾ ಮಹಾವಿದ್ಯಾಲಯ, ಔಷದ ಮಹಾವಿದ್ಯಾಲಯ, 250 ಹಾಸಿಗೆಗಳ ಸಾಮರ್ಥ್ಯವುಳ್ಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಹಾಗೂ ಇವುಗಳಿಗೆ ಸಂಬಂಧಪಟ್ಟ ಅನುಬಂಧಿತ ಕಟ್ಟಡಗಳ ನಿರ್ಮಾಣ.

ಆ) ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಪ್ರಾರಂಭಿಸಲಾಗುವುದೆಂದು ಉತ್ತರ ನೀಡಲಾಗಿತ್ತು.

ಭೂ ಸ್ವಾಧೀನ ಪ್ರಕ್ರಿಯೆ ಅಂತಿಮಗೊಳ್ಳದಿರುವುದರಿಂದ.

ಇ) ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ವಿಶ್ವವಿದ್ಯಾಲಯ ಸ್ಥಾಪನೆಗೆ ಚಾಲನೆ ನೀಡಲ್ಪಡುತ್ತದೆ.